# National
# Kannada
# 08.04.2026 19.35 hrs
## ಆಕಾಶವಾಣಿ, ಬೆಂಗಳೂರು

## ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಮುಂಗಾರು ಋತುವಿನ ರಸಗೊಬ್ಬರದ ಮೇಲಿನ ಸಬ್ಸಿಡಿ ದರ ನಿಗದಿಪಡಿಸುವ ಪ್ರಸ್ತಾವನೆ ಅನುಮೋದಿಸಿದ ಕೇಂದ್ರ ಸಚಿವ ಸಂಪುಟ
2. ಕರ್ನಾಟಕದ ಎರಡು ವಿಧಾನಸಭೆ ಉಪಚುನಾವಣೆ ಸೇರಿದಂತೆ ಅಸ್ಸಾಂ, ಕೇರಳ, ಪುದುಚೇರಿ ವಿಧಾನಸಭೆ ಚುನಾವಣೆ; ನಾಳೆ ಮತದಾನ
3. ನಾಳೆಯಿಂದ ಇದೇ 12ರವರೆಗೆ ಮಾರಿಷಸ್ ಮತ್ತು ಯುಎಇಗೆ ಪ್ರವಾಸ ಕೈಗೊಳ್ಳಲಿರುವ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್
4. ಐಪಿಎಲ್ ಟಿ–20 ಕ್ರಿಕೆಟ್; ಗುಜರಾತ್ ಟೈಟನ್ಸ್ ವಿರುದ್ಧ ಟಾಸ್ ಗೆದ್ದು ಫೀಲ್ಡಿಂಗ್ ಆಯ್ಕೆ ಮಾಡಿಕೊಂಡ ಡೆಲ್ಲಿ ಕ್ಯಾಪಿಟಲ್ಸ್ ತಂಡ

***************

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ಇಂದು ನಡೆದ ಕೇಂದ್ರ ಸಚಿವ ಸಂಪುಟ ಸಭೆಯು, 2026ರ ಖಾರಿಫ್ ಋತುವಿನಲ್ಲಿ ಫಾಸ್ಫೇಟ್ ಮತ್ತು ಪೊಟ್ಯಾಷ್ ರಸಗೊಬ್ಬರಗಳ ಮೇಲಿನ ಪೋಷಕಾಂಶ ಆಧಾರಿತ ಸಬ್ಸಿಡಿ ದರಗಳನ್ನು ನಿಗದಿಪಡಿಸುವ ರಸಗೊಬ್ಬರ ಇಲಾಖೆಯ ಪ್ರಸ್ತಾವನೆಯನ್ನು ಅನುಮೋದಿಸಿದೆ. 2026ರ ಖಾರಿಫ್ ಋತುವಿಗೆ ಸುಮಾರು 41,534 ಕೋಟಿ ರೂಪಾಯಿಗಳ ತಾತ್ಕಾಲಿಕ ಬಜೆಟ್ ಅವಶ್ಯಕತೆ ಇದೆ.

ಧ್ವನಿ : ಅಶ್ವಿನಿ ವೈಷ್ಣವ್ (23 ಸೆಕೆಂಡುಗಳು)

ಪ್ರಹ್ಲಾದ್‌ಪುರದಿಂದ ಟೋಡಿ ಮಾಡ್‌ವರೆಗಿನ 41 ಕಿಮೀ ಉದ್ದದ ಪರಿವರ್ತಕ ಉತ್ತರ–ದಕ್ಷಿಣ ಕಾರಿಡಾರ್ ಜೈಪುರ ಮೆಟ್ರೋ 2ನೇ ಹಂತಕ್ಕೂ ಸಚಿವ ಸಂಪುಟ ಅನುಮೋದನೆ ನೀಡಿದೆ, ಇದು 36 ನಿಲ್ದಾಣಗಳನ್ನು ಒಳಗೊಂಡಿದ್ದು, ಇದರ ಒಟ್ಟು ಯೋಜನಾ ವೆಚ್ಚ 13,037 ಕೋಟಿ ರೂಪಾಯಿಯಾಗಲಿದೆ. ಈ ಯೋಜನೆಯನ್ನು ಭಾರತ ಸರ್ಕಾರ ಮತ್ತು ರಾಜಸ್ಥಾನ ಸರ್ಕಾರದ ಜಂಟಿ ಉದ್ಯಮವಾದ ರಾಜಸ್ಥಾನ ಮೆಟ್ರೋ ರೈಲು ನಿಗಮ ಲಿಮಿಟೆಡ್ ಕಾರ್ಯಗತಗೊಳಿಸಲಿದೆ.

ಎಚ್.ಪಿ.ಸಿ.ಎಲ್ ರಾಜಸ್ಥಾನ್ ರಿಫೈನರಿ ಲಿಮಿಟೆಡ್‌ನ ಯೋಜನಾ ವೆಚ್ಚವನ್ನು, 43,129 ಕೋಟಿಯಿಂದ 79,459 ಕೋಟಿ ರೂಪಾಯಿಗಳಿಗೆ ಮತ್ತು ಹಿಂದೂಸ್ತಾನ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್ ನಿಂದ 8,962 ಕೋಟಿ ರೂಪಾಯಿ ಹೆಚ್ಚುವರಿ ಷೇರು ಹೂಡಿಕೆಗೆ ಪರಿಷ್ಕರಣೆ ಮಾಡಲು ಸಚಿವ ಸಂಪುಟ ಅನುಮೋದನೆ ನೀಡಿದೆ.

***************

ಅಸ್ಸಾಂ, ಕೇರಳ, ಕೇಂದ್ರಾಡಳಿತ ಪ್ರದೇಶವಾದ ಪುದುಚೆರಿ ಹಾಗೂ ಕರ್ನಾಟಕದ ದಾವಣಗೆರೆ ಹಾಗೂ ಬಾಗಲಕೋಟೆ ಮತ್ತು ತ್ರಿಪುರದ ಧರ್ಮನಗರ ಕ್ಷೇತ್ರಗಳ ಉಪಚುನಾವಣೆಯ ಮತದಾನ ನಾಳೆ ನಡೆಯಲಿದೆ.
ಅಸ್ಸಾಂನ 126, ಕೇರಳದ 140, ಪುದುಚೆರಿಯ 30 ವಿಧಾನಸಭಾ ಕ್ಷೇತ್ರಗಳು ಹಾಗೂ ಉಪಚುನಾವಣೆ ನಡೆಯಲಿರುವ ಕರ್ನಾಟಕದ ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ಕ್ಷೇತ್ರ ಸೇರಿದಂತೆ 8 ಮತ ಕ್ಷೇತ್ರಗಳಲ್ಲಿ ಮತದಾನ ನಡೆಯಲಿದೆ.
ಮೇ 4ರಂದು ಮತ ಎಣಿಕೆ ನಡೆಯಲಿದ್ದು, ಅಂದೇ ಫಲಿತಾಂಶ ಹೊರಬೀಳುವ ನಿರೀಕ್ಷೆಯಿದೆ.
ಶಾಂತಿಯುತ ಮತ್ತು ಪಾರದರ್ಶಕ ಚುನಾವಣೆ ನಡೆಸಲು ಆಯೋಗ ಸಕಲ ಸಿದ್ಧತೆ ಮಾಡಿದ್ದು, ಅಗತ್ಯ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ.

***************

ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ನಾಳೆಯಿಂದ ಇದೇ 12ರವರೆಗೆ ಮಾರಿಷಸ್ ಮತ್ತು ಯುನೈಟೆಡ್ ಅರಬ್ ಎಮಿರೇಟ್ಸ್‌ಗೆ ಪ್ರವಾಸ ಕೈಗೊಳ್ಳಲಿದ್ದಾರೆ.

ಪ್ರವಾಸದ ಮೊದಲ ಹಂತದಲ್ಲಿ ನಾಳೆ ಮತ್ತು ನಾಡಿದ್ದು, ಮಾರಿಷಸ್‌ಗೆ ಭೇಟಿ ನೀಡಲಿರುವ ಅವರು, 9ನೇ ಹಿಂದೂ ಮಹಾಸಾಗರ ಸಮ್ಮೇಳನದಲ್ಲಿ ಭಾಗವಹಿಸಿ, ಭಾಷಣ ಮಾಡಲಿದ್ದಾರೆ. ಮಾರಿಷಸ್‌ನ ನಾಯಕರನ್ನು ಭೇಟಿ ಮಾಡಿ ದ್ವಿಪಕ್ಷೀಯ ಸಂಬಂಧಗಳ ಕುರಿತು ಪರಿಶೀಲನೆ ನಡೆಸಲಿದ್ದಾರೆ.

ಭೇಟಿಯ ಎರಡನೇ ಹಂತದಲ್ಲಿ, ಈ ತಿಂಗಳ 11 ಮತ್ತು 12 ರಂದು ಯುನೈಟೆಡ್ ಅರಬ್ ಎಮಿರೇಟ್ಸ್‌ಗೆ ಜೈಶಂಕರ್ ಭೇಟಿ ನೀಡಲಿದ್ದಾರೆ. ಭೇಟಿಯ ಈ ಸಮಯದಲ್ಲಿ ಯುಎಇ ನಾಯಕರನ್ನು ಭೇಟಿ ಮಾಡಿ ಎರಡೂ ದೇಶಗಳ ನಡುವಿನ ನಿಕಟ ಸಹಕಾರವನ್ನು ಪರಿಶೀಲಿಸಲಿದ್ದಾರೆ.

***************

ಅಮೇರಿಕ ಮತ್ತು ಇರಾನ್ ನಡುವಿನ ಕದನ ವಿರಾಮ ಘೋಷಣೆಯನ್ನು ಭಾರತ ಸ್ವಾಗತಿಸಿದೆ.

ಪಶ್ಚಿಮ ಏಷ್ಯಾದಲ್ಲಿ ಶಾಶ್ವತ ಶಾಂತಿ, ಅಡೆತಡೆಯಿಲ್ಲದ ನೌಕಾಯಾನ ಮತ್ತು ಹಾರ್ಮುಜ್ ಜಲಸಂಧಿಯ ಮೂಲಕ ನಡೆಯಲಿರುವ ಜಾಗತಿಕ ವಾಣಿಜ್ಯ ಚಟುವಟಿಕೆಗಳಿಗೆ ಇದು ಸಹಕಾರಿಯಾಗಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ಹೇಳಿಕೆಯಲ್ಲಿ ಭರವಸೆ ವ್ಯಕ್ತಪಡಿಸಿದೆ.

ಪ್ರಸ್ತುತ ನಡೆಯುತ್ತಿರುವ ಸಂಘರ್ಷಕ್ಕೆ ಶೀಘ್ರ ಅಂತ್ಯವನ್ನು ತರಲು ಅಗತ್ಯವಾದ ಉದ್ವಿಗ್ನತೆ ನಿವಾರಣೆ ಮತ್ತು ರಾಜತಾಂತ್ರಿಕತೆಯನ್ನು ಭಾರತ ನಿರಂತರವಾಗಿ ಪ್ರತಿಪಾದಿಸುತ್ತಿದೆ. ಇಲ್ಲಿಯವರೆಗೆ ಸಂಘರ್ಷವು ಅಪಾರ ಸಾವು–ನೋವುಗಳನ್ನು ಉಂಟುಮಾಡಿದ್ದು, ಜಾಗತಿಕ ಇಂಧನ ಪೂರೈಕೆ ಮತ್ತು ವ್ಯಾಪಾರ ಜಾಲಗಳನ್ನು ಅಡ್ಡಿಪಡಿಸಿದೆ ಎಂದು ಸಚಿವಾಲಯ ತಿಳಿಸಿದೆ.

***************

ಇರಾನ್‌ನಲ್ಲಿ ನಡೆಯುತ್ತಿರುವ ಬೆಳವಣಿಗೆಗಳನ್ನು ಗಮನದಲ್ಲಿಟ್ಟುಕೊಂಡು, ಭಾರತೀಯ ರಾಯಭಾರ ಕಚೇರಿಯು ಪ್ರಸ್ತುತ ಇರಾನ್‌ನಲ್ಲಿರುವ ಭಾರತೀಯ ಪ್ರಜೆಗಳು ರಾಯಭಾರ ಕಚೇರಿಯ ಸಮನ್ವಯದೊಂದಿಗೆ, ಕಚೇರಿ ಸೂಚಿಸಿದ ಮಾರ್ಗಗಳನ್ನು ಬಳಸಿಕೊಂಡು ಬೇಗನೆ ಇರಾನ್‌ನಿಂದ ನಿರ್ಗಮಿಸುವಂತೆ ಸೂಚಿಸಿದೆ.

ರಾಯಭಾರ ಕಚೇರಿಯೊಂದಿಗೆ ಪೂರ್ವ ಸಮಾಲೋಚನೆ ಮತ್ತು ಸಮನ್ವಯವಿಲ್ಲದೆ ಯಾವುದೇ ಅಂತಾರಾಷ್ಟ್ರೀಯ ಭೂ ಗಡಿಯನ್ನು ಸಮೀಪಿಸಲು ಯಾವುದೇ ಪ್ರಯತ್ನ ಮಾಡಬಾರದು. ಏತನ್ಮಧ್ಯೆ, ಅಧಿಕೃತ ಅಧಿಸೂಚನೆಗಳಿಗೆ ಗಮನ ನೀಡುವಂತೆ ಭಾರತೀಯ ಪ್ರಜೆಗಳನ್ನು ರಾಯಭಾರ ಕಚೇರಿ ವಿನಂತಿಸಿದೆ.

***************

ಕಳೆದ ಹಣಕಾಸು ವರ್ಷದಲ್ಲಿ ಭಾರತವು 55 ಗಿಗಾ ವ್ಯಾಟ್‌ಗಿಂತ ಹೆಚ್ಚಿನ ಪಳೆಯುಳಿಕೆಯೇತರ ಸಾಮರ್ಥ್ಯವನ್ನು ಉತ್ಪಾದನೆ ಮಾಡಿದೆ ಎಂದು ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ನವದೆಹಲಿಯಲ್ಲಿ ಇಂದು ಮಾಧ್ಯಮಗಳಿಗೆ ಮಾಹಿತಿ ನೀಡಿದರು.

2025–26ರಲ್ಲಿ ನವೀಕರಿಸಬಹುದಾದ ಇಂಧನದ ಸಾಧನೆಗಳ ಕುರಿತು ದೇಶದಲ್ಲಿ ಇಲ್ಲಿಯವರೆಗೆ ಪಳೆಯುಳಿಕೆಯೇತರ ಇಂಧನ ಮೂಲಗಳಿಂದ ಒಟ್ಟು 283 ಗಿಗಾ ವ್ಯಾಟ್‌ಗಿಂತ ಹೆಚ್ಚಿನ ಸಾಮರ್ಥ್ಯವನ್ನು ಸ್ಥಾಪಿಸಲಾಗಿದೆ ಎಂದು ಅವರು ಹೇಳಿದರು. ನವೀಕರಿಸಬಹುದಾದ ಇಂಧನ ಸ್ಥಾಪಿತ ಸಾಮರ್ಥ್ಯದಲ್ಲಿ ಭಾರತ ಜಾಗತಿಕ ಮಟ್ಟದಲ್ಲಿ ಮೂರನೇ ಸ್ಥಾನದಲ್ಲಿದೆ ಎಂದು ಅವರು ಹೇಳಿದರು.

***************

2030ರ ಕಾಮನ್‌ವೆಲ್ತ್ ಕ್ರೀಡಾಕೂಟವನ್ನು ಆಯೋಜಿಸಲು ರಾಜ್ಯದ ಸಿದ್ಧತೆಯನ್ನು ಪರಿಶೀಲಿಸಲು ಮತ್ತು ಅಧ್ಯಯನ ಮಾಡಲು ಕಾಮನ್‌ವೆಲ್ತ್ ಕ್ರೀಡಾಕೂಟ ಫೆಡರೇಶನ್‌ನ ಉನ್ನತ ಮಟ್ಟದ ನಿಯೋಗ ಇಂದು ಗುಜರಾತ್‌ಗೆ ನಾಲ್ಕು ದಿನಗಳ ಭೇಟಿ ನೀಡಿದೆ.

ಗಾಂಧಿನಗರದಲ್ಲಿ ಇಂದು ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಅವರೊಂದಿಗೆ ಸಭೆ ನಡೆಸಿ ನಂತರ ಈ ಭೇಟಿ ಆರಂಭಿಸಲಾಯಿತು.

***************

ರಾಷ್ಟ್ರ ರಾಜಧಾನಿ ಪ್ರದೇಶ ಮತ್ತು ಪಕ್ಕದ ಪ್ರದೇಶಗಳಲ್ಲಿನ ವಾಯು ಗುಣಮಟ್ಟ ನಿರ್ವಹಣಾ ಆಯೋಗವು, ದೆಹಲಿಯ 300 ಕಿಲೋಮೀಟರ್ ವ್ಯಾಪ್ತಿಯೊಳಗೆ ಇರುವ ಆರು ಉಷ್ಣ ವಿದ್ಯುತ್ ಸ್ಥಾವರಗಳ ಮೇಲೆ ಸುಮಾರು 61.85 ಕೋಟಿ ರೂಪಾಯಿಗಳ ಪರಿಸರ ಪರಿಹಾರವನ್ನು ವಿಧಿಸಿದೆ.

ಕಲ್ಲಿದ್ದಲಿನೊಂದಿಗೆ ಭತ್ತದ ಹುಲ್ಲಿನಿಂದ ಮಾಡಿದ 5 ಪ್ರತಿಶತ ಬಯೋಮಾಸ್ ಪೆಲೆಟ್‌ಗಳು ಅಥವಾ ಬ್ರಿಕೆಟ್‌ಗಳ ಮಿಶ್ರಣವನ್ನು ಬಳಸುವುದನ್ನು ಕಡ್ಡಾಯಗೊಳಿಸುವ ಶಾಸನಬದ್ಧ ನಿಬಂಧನೆಗಳನ್ನು ಪಾಲಿಸದಿದ್ದಕ್ಕಾಗಿ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಪರಿಸರ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ.

***************

ಪಶ್ಚಿಮ ಏಷ್ಯಾ ಸಂಘರ್ಷದ ನಡುವೆ ದೇಶಾದ್ಯಂತ ಗಣಿ ಮತ್ತು ವಿದ್ಯುತ್ ಸ್ಥಾವರಗಳಲ್ಲಿ ಸಾಕಷ್ಟು ಪ್ರಮಾಣದ ಕಲ್ಲಿದ್ದಲು ಸಂಗ್ರಹವಿದೆ ಎಂದು ಸರ್ಕಾರ ಇಂದು ಪ್ರತಿಪಾದಿಸಿದೆ.

ಪಶ್ಚಿಮ ಏಷ್ಯಾದಲ್ಲಿನ ಇತ್ತೀಚಿನ ಬೆಳವಣಿಗೆಗಳ ಕುರಿತು ಅಂತರ-ಸಚಿವರ ಸಭೆಯನ್ನುದ್ದೇಶಿಸಿ, ಕಲ್ಲಿದ್ದಲು ಸಚಿವಾಲಯದ ಜಂಟಿ ಕಾರ್ಯದರ್ಶಿ ಸಂಜೀವ್ ಕುಮಾರ್ ಕಾಸ್ಸಿ ನವದೆಹಲಿಯಲ್ಲಿಂದು ಮಾತನಾಡಿದರು.

ಕಲ್ಲಿದ್ದಲಿನ ಬೆಲೆಯಲ್ಲಿ ಯಾವುದೇ ಏರಿಕೆಯಾಗಿಲ್ಲ. ಈ ವಲಯದ ಪೂರ್ವಭಾವಿ ವಿಧಾನ ಮತ್ತು ಸಮಯೋಚಿತ ಕ್ರಮಗಳಿಂದಾಗಿ, ಪಶ್ಚಿಮ ಏಷ್ಯಾ ಸಂಘರ್ಷದ ಪರಿಣಾಮ ತಾಕುವ ಮೊದಲೇ ಸಾಕಷ್ಟು ಕಲ್ಲಿದ್ದಲನ್ನು ಸಂಗ್ರಹಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು. ಕಲ್ಲಿದ್ದಲು ಕಂಪನಿಗಳು ಸಾಕಷ್ಟು ಕಲ್ಲಿದ್ದಲು ಪೂರೈಕೆಯನ್ನು ಖಚಿತಪಡಿಸಿಕೊಳ್ಳಲು ಸಚಿವಾಲಯ ಮಾರ್ಗದರ್ಶನ ನೀಡಿದೆ ಎಂದು ಅವರು ತಿಳಿಸಿದರು.

ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ ಮಾತನಾಡಿ, ದೇಶಾದ್ಯಂತ ಎಲ್‌ಪಿಜಿ, ಪೆಟ್ರೋಲ್ ಮತ್ತು ಡೀಸೆಲ್ ಸಾಕಷ್ಟು ಪ್ರಮಾಣದಲ್ಲಿ ಲಭ್ಯವಿದೆ ಎಂದು ಹೇಳಿದರು. ಗೃಹ ಬಳಕೆಗೆ 100 ಪ್ರತಿಶತ ಪೂರೈಕೆಯನ್ನು ಖಚಿತಪಡಿಸಿಕೊಳ್ಳಲು ದೇಶೀಯ ಗ್ರಾಹಕರಿಗೆ ಆದ್ಯತೆ ನೀಡಲಾಗಿದೆ ಮತ್ತು ವಾಣಿಜ್ಯ ಎಲ್‌ಪಿಜಿ ಪೂರೈಕೆಯನ್ನು ನಿಯಂತ್ರಿಸಲಾಗಿದೆ. ಎಂದು ಅವರು ಮಾಹಿತಿ ನೀಡಿದರು.

***************

ಭಾರತ ಚುನಾವಣಾ ಆಯೋಗದ ಅಂತಾರಾಷ್ಟ್ರೀಯ ಚುನಾವಣಾ ಸಂದರ್ಶಕರ ಕಾರ್ಯಕ್ರಮದ ಅಡಿಯಲ್ಲಿ ಚುನಾವಣಾ ಪ್ರಕ್ರಿಯೆಯನ್ನು ವೀಕ್ಷಿಸಲು ಆರು ದೇಶಗಳಿಂದ ಒಂಬತ್ತು ಪ್ರತಿನಿಧಿಗಳು ಪುದುಚೇರಿಗೆ ಆಗಮಿಸಿದ್ದಾರೆ.

***************

ದೆಹಲಿಯ ಅರುಣ್ ಜೇಟ್ಲಿ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಇಂಡಿಯನ್ ಪ್ರೀಮಿಯರ್ ಲೀಗ್-ಐಪಿಎಲ್ ಟಿ-20 ಕ್ರಿಕೆಟ್‌ನ ಇಂದಿನ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಮತ್ತು ಗುಜರಾತ್ ಟೈಟನ್ಸ್ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಡೆಲ್ಲಿ ಕ್ಯಾಪಿಟಲ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

*******ಮುಕ್ತಾಯ********